ಇ) ಅತಿಕ್ರಮಣದ ಬಗ್ಗೆ ಬೆಳ್ತಂಗಡಿ ತಾಲ್ಲೂಕು ತಹಶೀಲ್ದಾರ್‌ರವರಿಗೆ ದಿನಾಂಕ: 17.08.2002ರಂದು ಕಾಲೇಜಿನ ಪ್ರಾಂಶುಪಾಲರ ಮೂಲಕ ಪತ್ರ ಬರೆಯಲಾಗಿದೆ. ಇದರ ಬಗ್ಗೆ ಜಿಲ್ಲಾಧಿಕಾರಿಗಳಿಗೂ ಪತ್ರ ಬರೆದು ನಿಯಮಾನುಸಾರ ಕ್ರಮ ಕೈಗೊಳ್ಳಲಾಗುತ್ತಿದೆ.

ಈ) ಆವರಣ ಗೋಡೆ ನಿರ್ಮಿಸಲು ಅಂದಾಜು ಪಟ್ಟಿಯನ್ನು ಕಳುಹಿಸಿಕೊಡುವಂತೆ ಕೋರಿ ಕಾಲೇಜಿನ ಪ್ರಾಂಶುಪಾಲರ ಮೂಲಕ ಲೋಕೋಪಯೋಗಿ ಇಲಾಖೆಗೆ ಪತ್ರ ಬರೆಯಲಾಗಿದೆ.

ಉ)

ವಿಷಯ/ ಪದನಾಮ	ಮಂಜೂರಾದ ಹುದ್ದೆ	ಕಾರ್ಯ ನಿರ್ವಹಿಸುತ್ತಿರುವವರ ಹುದ್ದೆ	ಖಾಲಿ ಹುದ್ದೆ
ಕನ್ನಡ	1	1	–
ಇಂಗ್ಲೀಷ್	1	1	–
ಇತಿಹಾಸ	1	1	–
ಅರ್ಥಶಾಸ್ತ್ರ	1	1	–
ರಾಜ್ಯಶಾಸ್ತ್ರ	1	1	–
ವಾಣಿಜ್ಯಶಾಸ್ತ್ರ	3	3	–
ಅಧೀಕ್ಷಕರು	1	–	1
ಪ್ರ.ದ.ಸ.	1	–	1
ದ್ವಿ.ದ.ಸ.	1	1	–
ಬೆರಳಚ್ಚುಗಾರರು	1	1	–
ಗ್ರಂಥಾಲಯ ಸಹಾಯಕರು	1	–	1
ಅಟೆಂಡರ್	1	1	–
ಪರಿಚಾರಕರು	2	1	1

ಊ) ಶೀಘ್ರ ಕ್ರಮವಹಿಸಲಾಗುತ್ತದೆ.

860 (1032) ಶ್ರೀ ಪ್ರಭಾಕರ ಬಂಗೇರ ಕೆ. (ಬೆಳ್ತಂಗಡಿ): ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬೆಳ್ತಂಗಡಿ ನಗರ ಪಂಚಾಯತ್ ಪ್ರದೇಶದಲ್ಲಿ ವಸತಿ ರಹಿತ ನಗರವಾಸಿಗಳನ್ನು ಗುರುತಿಸಲಾಗಿದೆಯೇ; ಹೌದಾದಲ್ಲಿ ಆ ಕುರಿತಾದ ವಿವರಗಳೇನು;

ಆ) ಈವರೆವಿಗೂ ಎಷ್ಟು ಕುಟುಂಬಗಳಿಗೆ ವಿವಿಧ ವಸತಿ ಯೋಜನೆಗಳಡಿಯಲ್ಲಿ ವಸತಿ ಸೌಲಭ್ಯ ಕಲ್ಪಿಸಲಾಗಿದೆ (ಮೂರು ವರ್ಷಗಳ ವಿವರ ನೀಡುವುದು);

ಇ) ಲಭ್ಯವಿರುವ ಸರ್ಕಾರಿ ಅಥವಾ ಖಾಸಗಿ ಜಮೀನನ್ನು ಖರೀದಿಸಿ ವಸತಿ ಸೌಲಭ್ಯವನ್ನು ಕಲ್ಪಿಸಿಕೊಡಲು ಸರ್ಕಾರ ಮುಂದಾಗುವುದೇ;

ಶ್ರೀ ಡಿ.ಟಿ. ಜಯಕುಮಾರ್ (ವಸತಿ ಸಚಿವರು): ಅ) ಹೌದು. 2003ನೇ ಮೇ-ಜೂನ್ ಮಾಹೆಯಲ್ಲಿ ಬೆಳ್ತಂಗಡಿ ನಗರ ಪಂಚಾಯತ್ ವ್ಯಾಪ್ತಿಯಲ್ಲಿ ವಸತಿ ರಹಿತ ಮತ್ತು ನಿವೇಶನ ರಹಿತರ ಸಮೀಕ್ಷೆಯನ್ನು ಕೈಗೊಂಡಿದ್ದು ಆ ಪ್ರಕಾರ ಒಬ್ಬರು ವಸತಿ ರಹಿತರಿದ್ದು 52 ನಿವೇಶನ ರಹಿತರಿರುವುದು ಕಂಡುಬಂದಿದೆ.

ಆ) ಕಳೆದ ಮೂರು ವರ್ಷಗಳಲ್ಲಿ ಬೆಳ್ತಂಗಡಿ ನಗರ ಪಂಚಾಯತ್ ವ್ಯಾಪ್ತಿಯಲ್ಲಿ ನಗರ ಆಶ್ರಯ ಯೋಜನೆಯಡಿ 33 ಕುಟುಂಬಗಳಿಗೆ ವಸತಿ ಸೌಕರ್ಯ ಕಲ್ಪಿಸಿಕೊಡಲಾಗಿದ್ದು ವಿವರ ಈ ಕೆಳಗಿನಂತಿದೆ.

ಪಟ್ಟಣ	02-03	03-04	04-05	ಒಟ್ಟು
ಬೆಳ್ತಂಗಡಿ	28	4	1	33

ಇ) ನಗರ ಆಶ್ರಯ ಯೋಜನೆಯಡಿ ವಸತಿ ರಹಿತರಿಗೆ ಲಭ್ಯವಿರುವ ಸರ್ಕಾರಿ ಜಮೀನಿನಲ್ಲಿ ವಸತಿ ಸೌಕರ್ಯವನ್ನು ಕಲ್ಪಿಸಿಕೊಡುವ ಅವಕಾಶವಿದೆ. ಸರ್ಕಾರಿ ಜಮೀನು ಲಭ್ಯವಿಲ್ಲದಿದ್ದಲ್ಲಿ ಇದಕ್ಕಾಗಿ ಖಾಸಗಿ ಜಮೀನನ್ನು ಮಾರ್ಗಸೂಚಿ ಬೆಲೆಗೆ ಖರೀದಿಸಲು ಜಿಲ್ಲಾಧಿಕಾರಿಗಳಿಗೆ ಅವಕಾಶವಿದೆ.

861 (1033) ಶ್ರೀ ಪ್ರಭಾಕರ ಬಂಗೇರ ಕೆ. (ಬೆಳ್ತಂಗಡಿ): ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬೆಳ್ತಂಗಡಿ ನಗರ ಪ್ರದೇಶದಲ್ಲಿರುವ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಹತ್ತು ವರ್ಷಗಳಿಗೂ ಮೀರಿ ಸೇವೆ ಸಲ್ಲಿಸುತ್ತಿರುವ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ವರ್ಗದವರ ಸಂಖ್ಯೆ ಎಷ್ಟು;

ಆ) ದೀರ್ಘ ಕಾಲದಿಂದಲೂ ಅವರುಗಳನ್ನು ವರ್ಗಾವಣೆ ಮಾಡದಿರಲು ಕಾರಣಗಳೇನು;